# ಕರ್ನಾಟಕ ವಿಧಾನ ಪರಿಷತ್

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1118 (984)**
**ಸದಸ್ಯರ ಹೆಸರು : ಶ್ರೀ. ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭಾ ಕ್ಷೇತ್ರ)**
**ಉತ್ತರಿಸುವ ದಿನಾಂಕ : 12.03.2026**
**ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು**

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕಳಸಾ-ಬಂಡೂರಿ ಮತ್ತು ಮಹದಾಯಿ ಯೋಜನೆಗಳಿಗೆ ಅರಣ್ಯ ಇಲಾಖೆಯ ಅನುಮತಿ ದೊರೆತಿದ್ದರೂ ಸಹ ಕೇಂದ್ರ ಸರ್ಕಾರವು ಗೆಜೆಟ್ ಅಧಿಸೂಚನೆ (Gazette Notification) ಹೊರಡಿಸಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ; | ಮಾನ್ಯ ಮಹಾದಾಯಿ ನ್ಯಾಯಾಧೀಕರಣವು ದಿನಾಂಕ: 14.08.2018ರಂದು ನೀಡಿದ ಅಂತಿಮ ತೀರ್ಪಿನನ್ವಯ ಕರ್ನಾಟಕ ರಾಜ್ಯದ ಕಳಸಾ ಬಂಡೂರಿ ಯೋಜನೆಗಳಿಗೆ 3.90 ಟಿ.ಎಂ.ಸಿ. ನೀರಿನ ಹಂಚಿಕೆಯಾಗಿದ್ದು, ಕೇಂದ್ರ ಸರ್ಕಾರವು ದಿನಾಂಕ:27.02.2020ರಂದು ವಿಶೇಷ ಗೆಜೆಟ್ ಅಧಿಸೂಚನೆಯನ್ನು ಹೊರಡಿಸಿರುತ್ತದೆ.<br>ಮಾನ್ಯ ಮಹಾದಾಯಿ ನ್ಯಾಯಾಧೀಕರಣದ ತೀರ್ಪಿನನ್ವಯ Clause VIII ರಡಿ ಕರ್ನಾಟಕ ರಾಜ್ಯವು ಶಾಸನಬದ್ಧ ಅನುಮೋದನೆಗಳನ್ನು ಕೇಂದ್ರ ಸರ್ಕಾರದಿಂದ ಪಡೆದ ನಂತರವೇ ಕಳಸಾ ಹಾಗೂ ಬಂಡೂರಿ ನಾಲಾ ತಿರುವು ಯೋಜನೆಗಳನ್ನು ಕಾರ್ಯಗತಗೊಳಿಸಬಹುದೆಂದು ನಿಬಂಧನೆ ಇರುತ್ತದೆ. |
| (ಆ) | ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಈವರೆಗೆ ಮಾಡಿರುವ ಖರ್ಚು ಎಷ್ಟು ಮತ್ತು ಕೇಂದ್ರದ ಅಸಹಕಾರದಿಂದಾಗಿ ಯೋಜನಾ ವೆಚ್ಚವು ಎಷ್ಟು ಪ್ರಮಾಣದಲ್ಲಿ ಏರಿಕೆಯಾಗುವ ಸಾಧ್ಯತೆಯಿದೆ, | **ಕೇಂದ್ರ ಜಲ ಆಯೋಗದ ತೀರುವಳಿ:** ಕಳಸಾ ಬಂಡೂರಿ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಜಲ ಆಯೋಗದಿಂದ ದಿನಾಂಕ:29.12.2022 ರಂದು ವಿವರವಾದ ಯೋಜನಾ ವರದಿಗಳಿಗೆ ಅನುಮೋದನೆ ಪಡೆಯಲಾಗಿದೆ.<br>**ಪರಿಸರ ಅನುಮತಿ:** ಇದು ಕುಡಿಯುವ ನೀರಿನ ಯೋಜನೆಯಾಗಿರುವುದರಿಂದ ಈ ಯೋಜನೆಗೆ ಪರಿಸರ ಅನುಮತಿ ಅಗತ್ಯವಿರುವುದಿಲ್ಲ. ಈ ಕುರಿತು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು 17.10.2019 ರಂದು ಸ್ಪಷ್ಟೀಕರಣ ಪತ್ರವನ್ನು ನೀಡಿರುತ್ತದೆ.<br>**ಅರಣ್ಯ ಮತ್ತು ವನ್ಯಜೀವಿ ತೀರುವಳಿ:**<br>I. ಕಳಸಾ ನಾಲಾ ತಿರುವು ಯೋಜನೆಯ ವನ್ಯಜೀವಿ ತೀರುವಳಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ರಾಷ್ಟ್ರೀಯ ವನ್ಯಜೀವಿ ಮಂಡಳಿ (NBWL) ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ ಹಾಗೂ ವನ್ಯಜೀವಿ ತೀರುವಳಿ ನಂತರ ಅರಣ್ಯ ತೀರುವಳಿ ಪ್ರಸ್ತಾವನೆಯನ್ನು ಅನುಮೋದನೆಗೆ ಸಲ್ಲಿಸಬೇಕಾಗಿರುತ್ತದೆ.<br>II. ಬಂಡೂರಾ ನಾಲಾ ತಿರುವು ಯೋಜನೆಯ ಅರಣ್ಯ ತೀರುವಳಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಇಲಾಖೆಗೆ ಸಲ್ಲಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಕೋರಿರುವ ಹೆಚ್ಚುವರಿ ಮಾಹಿತಿಗೆ ಸಂಬಂಧಿಸಿದಂತೆ, ಪ್ರಸ್ತಾವನೆಯು ಪ್ರಸ್ತುತ ರಾಜ್ಯ ಅರಣ್ಯ ಇಲಾಖೆಯ ನೋಡಲ್ ಅಧಿಕಾರಿಗಳ ಹಂತದಲ್ಲಿ ಪರಿಶೀಲನೆಯಲ್ಲಿದೆ.<br>ಈ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಗತ್ಯ ತೀರುವಳಿ ಪಡೆಯಲು ನಿರಂತರವಾಗಿ ಕೇಂದ್ರ ಸರ್ಕಾರದೊಂದಿಗೆ ಅನುಸರಣೆ ಮಾಡಲಾಗುತ್ತಿದ್ದು, |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | ದಿನಾಂಕ:27.11.2024 & ದಿನಾಂಕ:03.07.2025 ರ ಪತ್ರಗಳಲ್ಲಿ ಅರಣ್ಯ ಮತ್ತು ವನ್ಯ ಜೀವಿ ತೀರುವಳಿ ನೀಡುವಂತೆ ಕೋರಲಾಗಿರುತ್ತದೆ.<br><br>ಮುಂದುವರೆದು, ದಿನಾಂಕ:27.11.2024, 07.05.2025 ಹಾಗೂ 07.07.2025 ರಂದು ಖುದ್ದಾಗಿ ಮಾನ್ಯ ಕೇಂದ್ರ ಅರಣ್ಯ ಸಚಿವರನ್ನು ಭೇಟಿ ಮಾಡಿ ಶೀಘ್ರವಾಗಿ ಶಾಸನಬದ್ಧ ತೀರುವಳಿಗಳನ್ನು ನೀಡುವಂತೆ ಕೋರಲಾಗಿದೆ.<br><br>ಇದಲ್ಲದೇ, ದಿನಾಂಕ:03.09.2025ರ ಪತ್ರದಲ್ಲಿ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಮಾನ್ಯ ಪ್ರಧಾನ ಮಂತ್ರಿಗಳು, ಭಾರತ ಸರ್ಕಾರ ಇವರನ್ನು ಕಳಸಾ ಬಂಡೂರಾ ನಾಲಾ ಯೋಜನೆಗಳಿಗೆ ಅಗತ್ಯ ಅರಣ್ಯ ಹಾಗೂ ವನ್ಯ ಜೀವಿ ತೀರುವಳಿ ನೀಡುವಂತೆ ಕೋರಿರುತ್ತಾರೆ.<br><br>ಕಳಸಾ ಬಂಡೂರಿ ಯೋಜನೆಗೆ 2006 ರಿಂದ 2017ರ ಅವಧಿಯಲ್ಲಿ ರೂ.264.49 ಕೋಟಿ ವೆಚ್ಚ ಮಾಡಲಾಗಿರುತ್ತದೆ.<br><br>ಸದರಿ ಯೋಜನೆಯ ಅನುಷ್ಠಾನವು ಅರಣ್ಯ ತೀರುವಳಿಗಳಿಗೆ ಅವಲಂಭಿತವಾಗಿದ್ದು, ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆದು, ಕಾಮಗಾರಿಗಳನ್ನು ಭೌತಿಕವಾಗಿ ಪ್ರಾರಂಭಿಸಿದ ನಂತರ ಯೋಜನೆಯ ವೆಚ್ಚದ ಪ್ರಮಾಣದಲ್ಲಿ ಏರಿಕೆಯನ್ನು ಅಂದಾಜಿಸಬಹುದಾಗಿದೆ. |
| (ಇ) | ರಾಜ್ಯದ ಕೃಷ್ಣಾ ಮೇಲ್ದಂಡೆ ಯೋಜನೆ (UKP-3), ಭದ್ರಾ ಮೇಲ್ದಂಡೆ ಯೋಜನೆ ಮತ್ತು ಎತ್ತಿಹೊಳೆ ಯೋಜನೆಗಳು ಹಣಕಾಸಿನ ಕೊರತೆ ಅಥವಾ ತಾಂತ್ರಿಕ ಕಾರಣಗಳಿಂದ ಕುಂಠಿತ ಗೊಂಡಿರುವುದು ನಿಜವೇ; | ಸದರಿ ಯೋಜನೆಗಳಿಗೆ ಅಗತ್ಯವಿರುವ ಶಾಸನಬದ್ಧ ತೀರುವಳಿಗಳನ್ನು ಪಡೆಯಲು ಕೇಂದ್ರ ಸರ್ಕಾರವನ್ನು ನಿರಂತವಾಗಿ ಕೋರಲಾಗುತ್ತಿದ್ದು, ರಾಜ್ಯ ಸರ್ಕಾರದಿಂದ ಎಲ್ಲಾ ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಸಕ್ಷಮ ಪ್ರಾಧಿಕಾರಗಳಿಂದ ತೀರುವಳಿಗಳನ್ನು ಪಡೆದು ಅನುದಾನದ ಲಭ್ಯತೆ ಅನುಸಾರ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು. |
| (ಈ) | ಕೇಂದ್ರ ಸರ್ಕಾರದಿಂದ ಬರಬೇಕಾದ ಅನುದಾನ ಮತ್ತು ಅರಣ್ಯ ಇಲಾಖೆಯ ಬಾಕಿ ಇರುವ ಅನುಮತಿಗಳನ್ನು ತ್ವರಿತವಾಗಿ ಪಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | |
| (ಉ) | ಈ ನೀರಾವರಿ ಯೋಜನೆಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರು ಒದಗಿಸಲು ಸರ್ಕಾರದ ಮುಂದಿರುವ ಕಾಲಮಿತಿ (Action Plan) ಎಷ್ಟು? | |

ಸಂಖ್ಯೆ:ಜಸಂಇ 14 ಡಬ್ಲ್ಯೂಬಿಎಂ 2026

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು